# ಕರ್ನಾಟಕ ವಿಧಾನ ಪರಿಷತ್ತು
## ನೂರ ಮೂವತ್ತಮೂರನೆಯ ಅಧಿವೇಶನ
## (ಮುಂದುವರೆದ ಉಪವೇಶನಗಳು)
## <u>ಕಾರ್ಯಕಲಾಪಗಳ ಪಟ್ಟಿ</u>

**ಗುರುವಾರ, ದಿನಾಂಕ: 23ನೇ ನವೆಂಬರ್, 2017**

**(ಸಮಯ: ಬೆಳಗ್ಗೆ: 11.00 ಗಂಟೆಗೆ)**

* * *

## 01. ಪ್ರಶ್ನೋತ್ತರ

**ಅ.** ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು : ಮೂವತ್ತೆರಡನೆಯ ಪಟ್ಟಿ

**ಆ.** **<u>ತಡೆಹಿಡಿಯಲಾದ ಪ್ರಶ್ನೆ:</u>**

ಇಪ್ಪತ್ತೇಳನೆಯ ಪಟ್ಟಿಯಿಂದ ತಡೆಹಿಡಿಯಲಾದ **ಶ್ರೀ ವಿ.ಎಸ್. ಉಗ್ರಪ್ಪ** ಅವರ ಚುಕ್ಕೆ ಗುರುತಿನ **ಪ್ರಶ್ನೆ ಸಂಖ್ಯೆ:402(3954)** : **ಮಾನ್ಯ ಅಬಕಾರಿ ಸಚಿವರು**

**ಇ.** ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು : ಮೂವತ್ತೆರಡನೆಯ ಪಟ್ಟಿ

## 02. ಸಭೆಯ ಮುಂದಿಡಲಾಗುವ ಕಾಗದ ಪತ್ರಗಳು

ವಿಧಾನ ಸಭೆಯಿಂದ ಅಂಗೀಕೃತವಾದ ರೂಪದಲ್ಲಿರುವ ಈ ಕೆಳಕಂಡ ವಿಧೇಯಕಗಳನ್ನು **ಕಾರ್ಯದರ್ಶಿಯವರು** ಸಭೆಯ ಮುಂದಿಡುವುದು.

01. **ಕರ್ನಾಟಕ ಧನವಿನಿಯೋಗ (ಸಂಖ್ಯೆ:4) ವಿಧೇಯಕ, 2017**
02. **ಕರ್ನಾಟಕ ಖಾಸಗಿ ವೈದ್ಯಕೀಯ ಸಂಸ್ಥೆಗಳ (ತಿದ್ದುಪಡಿ) ವಿಧೇಯಕ, 2017**
03. **ಕರ್ನಾಟಕ ಭೂ ಕಂದಾಯ (ಮೂರನೇ ತಿದ್ದುಪಡಿ) ವಿಧೇಯಕ, 2017**

## 03. ಶಾಸನ ರಚನೆ

**<u>ವಿಧೇಯಕಗಳನ್ನು ಪರ್ಯಾಲೋಚಿಸುವುದು ಹಾಗೂ ಅಂಗೀಕರಿಸುವುದು</u>**

**01. ಕರ್ನಾಟಕ ಖಾಸಗಿ ವೈದ್ಯಕೀಯ ಸಂಸ್ಥೆಗಳ (ತಿದ್ದುಪಡಿ) ವಿಧೇಯಕ, 2017**

**ಶ್ರೀ ಕೆ.ಆರ್. ರಮೇಶ್ ಕುಮಾರ್** (ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು) ಅವರು:-

ಅ) ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ 2017ನೇ ಸಾಲಿನ "**ಕರ್ನಾಟಕ ಖಾಸಗಿ ವೈದ್ಯಕೀಯ ಸಂಸ್ಥೆಗಳ (ತಿದ್ದುಪಡಿ) ವಿಧೇಯಕ**"ವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

.....2

**೦2. ಕರ್ನಾಟಕ (ರಾಜ್ಯದ ಸಿವಿಲ್ ಸೇವೆಗಳಲ್ಲಿನ ಹುದ್ದೆಗಳಿಗೆ) ಮೀಸಲಾತಿ ಆಧಾರದ ಮೇಲೆ ಬಡ್ತಿ ಹೊಂದಿರುವ ಸರ್ಕಾರಿ ನೌಕರರಿಗೆ ತತ್ಪರಿಣಾಮವಾದ ಜೇಷ್ಠತೆಯನ್ನು ವಿಸ್ತರಿಸುವ ವಿಧೇಯಕ, 2017**

**ಶ್ರೀ ಸಿದ್ದರಾಮಯ್ಯ** (ಮಾನ್ಯ ಮುಖ್ಯಮಂತ್ರಿಯವರು ಹಾಗೂ ಹಣಕಾಸು ಸಚಿವರು) ಅವರು:-

ಅ) ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ 2017ನೇ ಸಾಲಿನ "**ಕರ್ನಾಟಕ (ರಾಜ್ಯದ ಸಿವಿಲ್ ಸೇವೆಗಳಲ್ಲಿನ ಹುದ್ದೆಗಳಿಗೆ) ಮೀಸಲಾತಿ ಆಧಾರದ ಮೇಲೆ ಬಡ್ತಿ ಹೊಂದಿರುವ ಸರ್ಕಾರಿ ನೌಕರರಿಗೆ ತತ್ಪರಿಣಾಮವಾದ ಜೇಷ್ಠತೆಯನ್ನು ವಿಸ್ತರಿಸುವ ವಿಧೇಯಕ**"ವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

**೦3. ಕರ್ನಾಟಕ ಧನವಿನಿಯೋಗ (ಸಂಖ್ಯೆ:4) ವಿಧೇಯಕ, 2017**

**ಶ್ರೀ ಸಿದ್ದರಾಮಯ್ಯ** (ಮಾನ್ಯ ಮುಖ್ಯಮಂತ್ರಿಯವರು ಹಾಗೂ ಹಣಕಾಸು ಸಚಿವರು) ಅವರು:-

ಅ) ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ 2017ನೇ ಸಾಲಿನ "**ಕರ್ನಾಟಕ ಧನವಿನಿಯೋಗ (ಸಂಖ್ಯೆ:4) ವಿಧೇಯಕ**"ವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

**೦4. ಕರ್ನಾಟಕ ಭೂ ಕಂದಾಯ (ಮೂರನೇ ತಿದ್ದುಪಡಿ) ವಿಧೇಯಕ, 2017**

**ಶ್ರೀ ಕಾಗೋಡು ತಿಮ್ಮಪ್ಪ** (ಮಾನ್ಯ ಕಂದಾಯ ಸಚಿವರು) ಅವರು:-

ಅ) ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ 2017ನೇ ಸಾಲಿನ "**ಕರ್ನಾಟಕ ಭೂ ಕಂದಾಯ (ಮೂರನೇ ತಿದ್ದುಪಡಿ) ವಿಧೇಯಕ**"ವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

**೦5. ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಗಳ ವಿಧೇಯಕ, 2017**

**ಶ್ರೀ ಬಸವರಾಜ ರಾಯರೆಡ್ಡಿ** (ಮಾನ್ಯ ಉನ್ನತ ಶಿಕ್ಷಣ ಸಚಿವರು) ಅವರು:-

ಅ) ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ 2017ನೇ ಸಾಲಿನ "**ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಗಳ ವಿಧೇಯಕ**"ವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

......3

## ೦೪. ಉತ್ತರ ಕರ್ನಾಟಕ ಭಾಗದ ಸಮಗ್ರ ಅಭಿವೃದ್ಧಿಗಾಗಿ ಕೈಗೊಳ್ಳಬೇಕಾಗಿರುವ ಕ್ರಮಗಳ ಬಗ್ಗೆ ನಡೆದ ಚರ್ಚೆಗೆ ಸರ್ಕಾರದಿಂದ ಉತ್ತರ

## ೦೫. ಗಮನ ಸೆಳೆಯುವ ಸೂಚನೆಗಳು

**ಅ. ಶ್ರೀ ವಿ. ಸೋಮಣ್ಣ** ಅವರು ಬೆಂಗಳೂರಿನ ಹಂಪಿ ನಗರದ ಒಂದನೇ ಮುಖ್ಯರಸ್ತೆಯನ್ನು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯವರು ಹಮ್ಮಿಕೊಂಡಿದ್ದ ಕಾರ್ಯಕ್ರಮಕ್ಕಾಗಿ ಸಂಪೂರ್ಣ ಬಂದ್ ಮಾಡಿದ್ದರಿಂದ, ಸಾರ್ವಜನಿಕರಿಗೆ ತೊಂದರೆಯಾಗಿರುವ ಬಗ್ಗೆ **ಮಾನ್ಯ ಬೆಂಗಳೂರು ಅಭಿವೃದ್ಧಿ ಮತ್ತು ನಗರ ಯೋಜನಾ ಸಚಿವರ** ಗಮನ ಸೆಳೆಯುವುದು.

**ಆ. ಶ್ರೀ ಪುಟ್ಟಣ್ಣ** ಅವರು ಬೆಂಗಳೂರಿನ ಮಲ್ಲೇಶ್ವರಂನ 18ನೇ ಕ್ರಾಸ್‌ನಲ್ಲಿರುವ ನಿರ್ಭಯ ಆಸ್ಪತ್ರೆಯಲ್ಲಿ ಗೂಂಡಾಗಳು ದಾಳ ನಡೆಸಿ, ಪೀಠೋಪಕರಣಗಳನ್ನು ಧ್ವಂಸಗೊಳಿಸಿದ್ದರ ಹಿನ್ನಲೆಯಲ್ಲಿ ಸದರಿ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದ ರೋಗಿಗಳಿಗೆ ತೊಂದರೆಯಾಗಿರುವ ಬಗ್ಗೆ **ಮಾನ್ಯ ಗೃಹ** ಸಚಿವರ ಗಮನ ಸೆಳೆಯುವುದು.

**ಇ. ಶ್ರೀ ಐವನ್ ಡಿ'ಸೋಜಾ** ಅವರು ಮಂಗಳೂರಿನ ಕರ್ನಾಟಕ ಸರ್ಕಾರಿ ಪಾಲಿಟೆಕ್ನಿಕ್ ಸಂಸ್ಥೆಯಲ್ಲಿ ಶಿಕ್ಷಕರ ಕೊರತೆ, ಕಟ್ಟಡ ದುರಸ್ಥಿ ಹಾಗೂ ಹಾಸ್ಟೆಲ್‌ನ ಮೂಲ ಸೌಲಭ್ಯಗಳ ಕೊರತೆಯಿಂದ ವಿದ್ಯಾರ್ಥಿಗಳಿಗೆ ತೊಂದರೆ ಉಂಟಾಗುತ್ತಿರುವ ಬಗ್ಗೆ **ಮಾನ್ಯ ಉನ್ನತ ಶಿಕ್ಷಣ** ಸಚಿವರ ಗಮನ ಸೆಳೆಯುವುದು.

## ೦೬. ನಿಯಮ ೩೩೦ರ ಮೇರೆಗೆ

**ಅ. ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ** ಅವರು ಉಡುಪಿ ಜಿಲ್ಲೆಯಲ್ಲಿ ಇಪ್ಪತ್ತಾರು ಕೆ.ಎಸ್.ಆರ್.ಟಿ.ಸಿ. ಬಸ್‌ಗಳನ್ನು ತಾಂತ್ರಿಕ ದೋಷದಿಂದಾಗಿ ರದ್ದು ಮಾಡಲಾಗಿರುವ ಕಾರಣ, ಅಂದಾಜು 1020 ರಿಯಾಯಿತಿ ಪಾಸ್‌ಗಳನ್ನು ಹೊಂದಿರುವ ವಿದ್ಯಾರ್ಥಿಗಳು ಅನುಭವಿಸುತ್ತಿರುವ ತೊಂದರೆಯ ಬಗ್ಗೆ ಪ್ರಸ್ತಾಪಿಸುವುದು. **(ಮಾನ್ಯ ಸಾರಿಗೆ ಸಚಿವರು)**

**ಆ. ಶ್ರೀ ರಮೇಶ್ ಬಾಬು** ಅವರು ಸಾರಿಗೆ ಇಲಾಖೆಯಲ್ಲಿ ಅಧಿಕಾರಿಯಾಗಿ ಕಾರ್ಯನಿರ್ವಹಿಸುತ್ತಿರುವ ರಾಜ್ಯ ಸರ್ಕಾರಿ ನೌಕರರ ಸಂಘದ ಅಧ್ಯಕ್ಷರು ಹಾಗೂ ಅವರ ಸಹೋದರರಾದ ಬ್ರೇಕ್ ಇನ್ಸ್‌ಪೆಕ್ಟರ್‌ರವರು ತಮ್ಮ ಸರ್ಕಾರಿ ನೌಕರಿಯನ್ನು ನಿರ್ವಹಿಸದೆ ಸಾರಿಗೆ ಸಚಿವರ ಹೆಸರನ್ನು ಬಳಸಿಕೊಂಡು ನೂರಾರು ಕೋಟಿ ರೂಪಾಯಿಗಳ ಆಸ್ತಿಯನ್ನು ಅಕ್ರಮವಾಗಿ ಗಳಿಸಿರುವ ಬಗ್ಗೆ ಸಮಗ್ರ ತನಿಖೆ ನಡೆಸಿ ನಿಯಮಾನುಸಾರ ಕ್ರಮ ಕೈಗೊಳ್ಳುವ ವಿಷಯದ ಬಗ್ಗೆ ಪ್ರಸ್ತಾಪಿಸುವುದು. **(ಮಾನ್ಯ ಸಾರಿಗೆ ಸಚಿವರು)**

....4

## 07. ಅರ್ಧ ಗಂಟೆ ಕಾಲಾವಧಿ ಚರ್ಚೆ

**ಅ**. ಕಾರ್ಮಿಕ ಕಲ್ಯಾಣ ನಿಧಿ ಕುರಿತ ವಿಷಯಕ್ಕೆ ಸಂಬಂಧಿಸಿದಂತೆ ದಿನಾಂಕ:15.11.2017ರ ಚುಕ್ಕೆ ಗುರುತಿನ **ಪ್ರಶ್ನೆ ಸಂಖ್ಯೆ:380(3767)ಕ್ಕೆ** ನೀಡಿದ ಉತ್ತರದಿಂದಾಗಿ ಉದ್ಭವಿಸಿದ ವಿಷಯದ ಕುರಿತು **ಶ್ರೀ ಟಿ.ಎ. ಶರವಣರವರಿಂದ** ಅರ್ಧ ಗಂಟೆ ಕಾಲಾವಧಿ ಚರ್ಚೆ.

**ಆ**. ಹೈದರಾಬಾದ್-ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿಯ ಅನುದಾನದ ಬಗ್ಗೆ ದಿನಾಂಕ:20.11.2017ರ ಚುಕ್ಕೆ ಗುರುತಿನ **ಪ್ರಶ್ನೆ ಸಂಖ್ಯೆ:430(4329)ಕ್ಕೆ** ನೀಡಿದ ಉತ್ತರದಿಂದಾಗಿ ಉದ್ಭವಿಸಿದ ವಿಷಯದ ಕುರಿತು **ಶ್ರೀ ಅಮರನಾಥ ಪಾಟೀಲ್ ಹಾಗೂ ಇತರರಿಂದ** ಅರ್ಧ ಗಂಟೆ ಕಾಲಾವಧಿ ಚರ್ಚೆ.

**ಕೆ.ಆರ್. ಮಹಾಲಕ್ಷ್ಮಿ**
**ಕಾರ್ಯದರ್ಶಿ(ಪ್ರ)**

---

ಪ್ರತಿ ದಿನದ ವಿಧಾನ ಪರಿಷತ್ತಿನ ಕಾರ್ಯಕಲಾಪಗಳ ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿಯೂ ಸಹ ಪಡೆದುಕೊಳ್ಳಬಹುದು.
**www.kla.kar.nic.in/council.htm**